**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ :- ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ದಿನಗೂಲಿ ನೌಕರರಿಗೆ ಹೆಚ್ಚುವರಿ ಬಾಕಿ ವೇತನ ಪಾವತಿಸಲು ಕಾರಣರಾದ ಅಧಿಕಾರಿ / ನೌಕರರುಗಳ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ – ಮಂಡನಾಧಿಕಾರಿಗಳನ್ನು ಬದಲಾಯಿಸುವ ಕುರಿತು – ಆದೇಶ.

ಓದಲಾಗಿದೆ :-1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 148 ಕೆಎಸ್‌ಎಸ್ 2018, ದಿನಾಂಕ :07.09.2018
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಜಿಪಂಚಿ/ಆ2/ಸಿಬ್ಬಂದಿ/ಸಿ.ಆರ್ 96/2009-10, ದಿನಾಂಕ: 24.09.2018.

********

ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:07.09.2018ರ ಆದೇಶದಲ್ಲಿ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ದಿನಗೂಲಿ, ಗುತ್ತಿಗೆ, ಅರೆ ಕಾಲಿಕ ಮತ್ತು ಸ್ವೆಪಂಡರಿ ನೌಕರರನ್ನು ತಾತ್ಕಾಲಿಕ ಆಧಾರದ ಮೇಲೆ ಸಲ್ಲಿಸಿರುವ ಸೇವೆಯನ್ನು ಅರ್ಹತಾದಾಯಕ ಎಂದು ಪರಿಗಣಿಸಿ, ಸೇವೆಯಲ್ಲಿ ಸಕ್ರಮಗೊಳಿಸಿರುವುದಾಗಿ ಹಾಗೂ ಸದರಿಯವರುಗಳು ಸೇವೆಗೆ ಸೇರಿದ ದಿನಾಂಕದಿಂದ 10 ವರ್ಷಗಳನ್ನು ಪೂರೈಸಿದ ದಿನಾಂಕವನ್ನು ಪರಿಗಣಿಸಿ ಕಾಲಕಾಲಕ್ಕೆ ಕಾಲಮಿತಿ ಮುಂಬಡ್ತಿ, 15 ವರ್ಷಗಳ ಸ್ವಯಂಚಾಲಿತ ಮುಂಬಡ್ತಿ, 20 ವರ್ಷಗಳ ಹೆಚ್ಚುವರಿ ವೇತನ ಬಡ್ತಿಗಳನ್ನು ಮಂಜೂರು ಮಾಡಿ ಬಾಕಿ ವೇತನ ಪಾವತಿಸಿ ರೂ.21.87 ಲಕ್ಷ ಆರ್ಥಿಕ ನಷ್ಟ ಉಂಟು ಮಾಡಿರುವುದಕ್ಕೆ ಮಹಾಲೇಖಪಾಲರ ಆಡಿಟ್ ಆಕ್ಷೇಪಣೆಯಾಗಿರುತ್ತದೆ ಎಂದು ತಿಳಿಸಿದ್ದರ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಹಿಂದಿನ ಜಿಲ್ಲಾ ಗ್ರಾಮೀಣಾಭಿವೃದ್ಧಿ ಸಂಸ್ಥೆ ಮತ್ತು ತಾಲ್ಲೂಕು ಅಭಿವೃದ್ಧಿ ಮಂಡಳಿಗಳಲ್ಲಿ ದಿನಗೂಲಿ / ಸಂಚಿತ ವೇತನದ ಮೇಲೆ ಸೇವೆ ಸಲ್ಲಿಸಿದ ಸಿಬ್ಬಂದಿಗಳಿಗೆ ಸರ್ಕಾರದ ನಿಯಮಾವಳಿಗಳನ್ನು ಉಲ್ಲಂಘಿಸಿ ಬಾಕಿ ವೇತನಗಳನ್ನು ಹೆಚ್ಚುವರಿಯಾಗಿ ಪಾವತಿಸಿ, ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಲು ಕಾರಣರಾಗಿರುವ ಅಧಿಕಾರಿ / ನೌಕರರುಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ತೀರ್ಮಾನಿಸಿದ್ದು, ಅದರಂತೆ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರನ್ವಯ ಹಾಗೂ ನಿಯಮ 11(2) ರನ್ವಯ ಶ್ರೀ ಬಸವನಹಳ್ಳಿ ವೆಂಕಟಕೃಷ್ಣಯ್ಯ ಪ್ರಕಾಶ್, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ಹಾಗೂ ಇದೇ ನಿಯಮದ ಉಪ ನಿಯಮ 11(5)ರಡಿ ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶ ಹೊರಡಿಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರು ಮೇಲೆ ಓದಲಾದ ಕ್ರಮಾಂಕ (2)ರ ದಿನಾಂಕ:24.09.2018ರ ಅರೆ ಸರ್ಕಾರಿ ಪತ್ರದಲ್ಲಿ ದಿನಾಂಕ:07.09.2018ರ ಸರ್ಕಾರದ ಆದೇಶದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ (ಆಡಳಿತ) ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದ್ದು, ಈ ಪ್ರಕರಣದಲ್ಲಿ ಸದರಿ ಅಧಿಕಾರಿಗಳು ಸಾಕ್ಷಿದಾರರಾಗಿರುವ ಕಾರಣ ಹಾಗೂ ಇವರು ಉಪ ಕಾರ್ಯದರ್ಶಿ (ಅಭಿವೃದ್ಧಿ) ಹುದ್ದೆಯಲ್ಲಿಯೂ ಪ್ರಭಾರದಲ್ಲಿದ್ದು, ಜಿಲ್ಲಾ ಪಂಚಾಯಿತಿಯಲ್ಲಿ ಮುಖ್ಯ ಲೆಕ್ಕಾಧಿಕಾರಿ, ಮುಖ್ಯ ಯೋಜನಾಧಿಕಾರಿ ಹುದ್ದೆಗಳು ಖಾಲಿ ಇದ್ದು, ಶ್ರೀಯುತರಿಗೆ ಕೆಲಸದ ಒತ್ತಡ ಜಾಸ್ತಿ ಇರುವುದರಿಂದ ಇವರ ಬದಲಾಗಿ ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸುವಂತೆ ಕೋರಿರುತ್ತಾರೆ.

ಆದ್ದರಿಂದ ಸದರಿ ಪ್ರಕರಣದಲ್ಲಿ ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರ ಬದಲಿಗೆ ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 148 ಕೆಎಸ್‌ಎಸ್ 2016(ಭಾಗ)**
**ಬೆಂಗಳೂರು, ದಿನಾಂಕ: 30.10.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ , ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 148 ಕೆಎಸ್‌ಎಸ್

2016, ದಿನಾಂಕ : 07.09.2018ರಲ್ಲಿ ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು, ಇವರ ಬದಲಿಗೆ ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯಿತಿ, ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ಮಂಡನಾಧಿಕಾರಿಯವರು ಕೂಡಲೇ ವಿಚಾರಣಾಧಿಕಾರಿಗಳನ್ನು ಸಂಪರ್ಕಿಸಿ, ಇಲಾಖಾ ವಿಚಾರಣೆಯನ್ನು ತ್ವರಿತವಾಗಿ ಕೈಗೊಂಡು 3 ತಿಂಗಳೊಳಗಾಗಿ ಪೂರ್ಣಗೊಳಿಸಿ, ವರದಿಯನ್ನು ಸಲ್ಲಿಸುವ ದಿಸೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

30/10/18

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು ಬಿ ಮತ್ತು ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

30/10/2018

ಇವರಿಗೆ :-

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಚಿಕ್ಕಮಗಳೂರು.
4) ಶ್ರೀ ಬಸವನಹಳ್ಳಿ ವೆಂಕಟಕೃಷ್ಣಯ್ಯ ಪ್ರಕಾಶ್ (ಬಿ.ವಿ.ಪ್ರಕಾಶ್), ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮನೆ ನಂ.01, 09/02, ಓಂ ಅಪಾರ್ಟ್‌ಮೆಂಟ್, 3ನೇ ಮುಖ್ಯರಸ್ತೆ, 17ನೇ ಉಪ (ಅಡ್ಡ) ರಸ್ತೆ, ಮಾರ್ಗೋಸ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5) ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು –
6) ಸಹಾಯಕ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು – ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆಯನ್ನು ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
7) ಶ್ರೀ ನಿಂಗರಾಜು, ಹಿಂದಿನ ಉಪ ಕಾರ್ಯದರ್ಶಿ(ಆಡಳಿತ) (ನಿವೃತ್ತ)
8) ಶ್ರೀ ಚಂದ್ರಶೇಖರಯ್ಯ, ಹಿಂದಿನ ಸಹಾಯಕ ಕಾರ್ಯದರ್ಶಿ (ನಿವೃತ್ತ)
9) ಶ್ರೀ ಎಂ.ಎಸ್.ಗಿರೀಶ್, ವ್ಯವಸ್ಥಾಪಕರು,
10) ಶ್ರೀ ಕೆ.ಎಸ್.ನರಸಿಂಹಮೂರ್ತಿ, ಪ್ರಥಮ ದರ್ಜೆ ಸಹಾಯಕ

(7–10) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಮೂಲಕ.

11) ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಶಾಖೆಗೆ.
12) ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಶಾಖೆಗೆ.
13) ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
14) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.